## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 97
2. ಸದಸ್ಯರ ಹೆಸರು : ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 09/07/2018
4. ಉತ್ತರಿಸಬೇಕಾದ ಸಚಿವರು : ಜಲಸಂಪನ್ಮೂಲ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಗದಗಿನ ಜಿಮ್ಸ್ (GIMS) ಆಸ್ಪತ್ರೆಯಲ್ಲಿ ಒಳರೋಗಿಗಳಿಗೆ ನಿತ್ಯ ಉಪಯೋಗಿಸಲು ಬೇಕಾಗಿರುವ ನೀರು ಮತ್ತು ಕುಡಿಯುವ ನೀರಿನ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದರ ಪರಿಹಾರಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮವೇನು; | ಹೌದು.<br><br>ಗದಗಿನ ಜಿಮ್ಸ್ (GIMS) ಆಸ್ಪತ್ರೆಯ ಆವರಣದಲ್ಲಿ ಚಾಲ್ತಿಯಲ್ಲಿರುವ ಒಟ್ಟು 03 ಬೋರ್‌ವೆಲ್‌ಗಳಿಂದ ದಿನನಿತ್ಯ ನೀರು ಸರಬರಾಜು ಮಾಡಲಾಗುತ್ತಿದ್ದು, ಒಂದು ದಿನಕ್ಕೆ ಸುಮಾರು 01 ಲಕ್ಷ ಲೀಟರ್‌ಗಳ ನೀರಿನ ಬಳಕೆಯಾಗುತ್ತಿದೆ. ಬೇಸಿಗೆಯಲ್ಲಿ ಬೋರ್‌ವೆಲ್‌ಗಳಿಂದ ನೀರಿನ ಕೊರತೆ ಉಂಟಾದಾಗ ಅವಶ್ಯವಿದ್ದಷ್ಟು ನೀರನ್ನು ಟ್ಯಾಂಕರ್‌ಗಳ ಮೂಲಕ ಸರಬರಾಜು ಮಾಡಲಾಗುತ್ತಿದೆ.<br><br>ಕುಡಿಯುವ ನೀರಿಗಾಗಿ ಆಸ್ಪತ್ರೆಯ ಹೊರಗೆ 1000 ಲೀ. ಸಾಮರ್ಥ್ಯವಿರುವ ಶುದ್ಧ ನೀರಿನ ಘಟಕ ಮತ್ತು ಆಸ್ಪತ್ರೆಯ ಒಳಗೆ 1200 ಲೀ. ಸಾಮರ್ಥ್ಯವಿರುವ ಶುದ್ಧ ನೀರಿನ ಘಟಕಗಳನ್ನು ಹೊಂದಿದ್ದು ಇವುಗಳ ಮೂಲಕ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲಾಗುತ್ತಿದೆ. |
| ಆ) | ಗದಗಿನ ಜಿಮ್ಸ್ (GIMS) ಆಸ್ಪತ್ರೆಯಲ್ಲಿ ಎಂ.ಡಿ.ಆರ್. ಟಿ.ಬಿ. ರೋಗಿಗಳಿಗೆ ವೈದ್ಯಕೀಯ ಚಿಕಿತ್ಸೆ ಕೊಡಲು ಪ್ರತ್ಯೇಕ ವಾರ್ಡಿನ ವ್ಯವಸ್ಥೆ ಮಾಡಲಾಗಿದೆಯೇ; (ವಿವರ ನೀಡುವುದು) | ಗದಗಿನ ಜಿಮ್ಸ್ (GIMS) ಆಸ್ಪತ್ರೆಯಲ್ಲಿ ಈಗಾಗಲೇ ಟಿ.ಬಿ. ರೋಗಿಗಳಿಗೆ ಪ್ರತ್ಯೇಕ ವಾರ್ಡ್‌ನ ವ್ಯವಸ್ಥೆಯೊಂದಿಗೆ ಚಿಕಿತ್ಸೆ ನೀಡಲಾಗುತ್ತಿದೆ, ಅದರೆ Final stageನಲ್ಲಿನ ಎಂ.ಡಿ.ಅರ್. ಟಿ.ಬಿ. ರೋಗಿಗಳನ್ನು ಸಾಮಾನ್ಯ ಟಿ.ಬಿ. ರೋಗಿಗಳಿಗೆ ಚಿಕಿತ್ಸೆ ನೀಡುತ್ತಿರುವ ವಾರ್ಡ್‌ನಲ್ಲಿ ಚಿಕಿತ್ಸೆ ನೀಡಲು ಸಾಧ್ಯವಿರುವುದಿಲ್ಲ ಅದ್ದರಿಂದ, ಈ ರೋಗಿಗಳಿಗೆ ಪ್ರತ್ಯೇಕ ವಾರ್ಡ್‌ನ ವ್ಯವಸ್ಥೆಯನ್ನು ಕಲ್ಪಿಸಲು ತುರ್ತು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಇದಲ್ಲದೆ 450 ಹಾಸಿಗೆ ಸಾಮರ್ಥ್ಯದ ಹೊಸ ಆಸ್ಪತ್ರೆಯ ಕಟ್ಟಡವನ್ನು ನಿರ್ಮಿಸಲು ಸರ್ಕಾರದ ಆದೇಶ ಸಂಖ್ಯೆ: ಆಕುಕ 581 ಎಮ್‌ಪಿಎಸ್ 2017 ದಿನಾಂಕ: 03.02.2018 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ (ಪ್ರತಿ ಲಗತ್ತಿಸಿದೆ). ಈ ಆಸ್ಪತ್ರೆಯಲ್ಲಿ ಎಂ.ಡಿ.ಅರ್ ಟಿ.ಬಿ. ರೋಗಿಗಳಿಗೆ ಅಗತ್ಯವಿರುವ ಎಲ್ಲ ಚಿಕಿತ್ಸೆ ಸೌಲಭ್ಯಗಳೊಂದಿಗೆ ಪ್ರತ್ಯೇಕ ವಾರ್ಡಿನ ವ್ಯವಸ್ಥೆ ಒದಗಿಸಲಾಗುವುದು. |
| ಇ) | ಎಂ.ಡಿ.ಆರ್. ಟಿ.ಬಿ. ಚಿಕಿತ್ಸೆ ನೀಡಲು ತಜ್ಞ ವೈದ್ಯರ ನೇಮಕಾತಿ ಮಾಡಿಕೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ವೈದ್ಯರನ್ನು ನೇಮಕ ಮಾಡಿಕೊಳ್ಳಲಾಗಿದೆ? | ಎಂ.ಡಿ.ಆರ್. ಟಿ.ಬಿ. ರೋಗಿಗಳಿಗೆ ವೈದ್ಯಕೀಯ ಚಿಕಿತ್ಸೆ ಕೊಡಲು ಎದೆ ಮತ್ತು ಕ್ಷಯ ರೋಗ ವಿಭಾಗದಲ್ಲಿ ಇಬ್ಬರು ತಜ್ಞ ವೈದ್ಯರಗಳ ಹುದ್ದೆ ಮಂಜೂರಾಗಿದ್ದು, ಈ ಹುದ್ದೆಗಳಲ್ಲಿ ಇಬ್ಬರು ತಜ್ಞ ವೈದ್ಯರಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. |

ಕಡತ ಸಂಖ್ಯೆ: ಆಕುಕ 303 ಎಂಪಿಎಸ್ 2018

(ಡಿ.ಕೆ.ಶಿವಕುಮಾರ್)
ಜಲಸಂಪನ್ಮೂಲ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಗದಗ, ಕೊಪ್ಪಳ, ಚಾಮರಾಜನಗರ ವೈದ್ಯಕೀಯ ಕಾಲೇಜುಗಳಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಗಳು ಹಾಗೂ ಕೊಡಗು, ಕೊಪ್ಪಳ ಮತ್ತು ಗದಗ ವೈದ್ಯಕೀಯ ಕಾಲೇಜುಗಳಲ್ಲಿ ಹೆಚ್ಚುವರಿ ಹಾಸ್ಟೆಲ್‌ಗಳನ್ನು ನಿರ್ಮಾಣ ಮಾಡಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

(1) ಸರ್ಕಾರದ ಆದೇಶ ಸಂಖ್ಯೆ:ಆಕುಕ 581 ಎಂಪಿಎಸ್ 2017, ದಿನಾಂಕ 03.02.2018
(2) ಸರ್ಕಾರದ ಆದೇಶ ಸಂಖ್ಯೆ:ಆಇ 204 ಬಿಆರ್‌ಎಸ್ 2017, ದಿನಾಂಕ 16.02.2018.

ಪ್ರಸ್ತಾವನೆ:

ಗದಗ, ಕೊಪ್ಪಳ ಮತ್ತು ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ಕಟ್ಟಡಗಳನ್ನು ಹಾಗೂ ಕೊಪ್ಪಳ, ಕೊಡಗು ಮತ್ತು ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಆವರಣದಲ್ಲಿ ಹಾಸ್ಟೆಲ್ ಕಟ್ಟಡಗಳನ್ನು ಕೆಳಕಂಡಂತೆ ಒಟ್ಟು ರೂ.359.38 ಕೋಟಿಗಳ (ಮುನ್ನೂರ ಐವತ್ತೊಂಬತ್ತು ಕೋಟಿ ಮೂವತ್ತೆಂಟು ಲಕ್ಷ ರೂಪಾಯಿಗಳು ಮಾತ್ರ) ಅಂದಾಜು ಮೊತ್ತದಲ್ಲಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

**(Rs. in lakhs)**

| ಕ್ರ ಸಂ. | ಕಾಮಗಾರಿಯ ವಿವರಗಳು | ಅಂದಾಜು ಮೊತ್ತ |
|---|---|---|
| 1. | ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿ | 10000.00 |
| 2. | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿ | 10000.00 |
| 3. | ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿ | 10000.00 |
| 4. | ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ಹಾಸ್ಟೆಲ್ ಕಟ್ಟಡ ನಿರ್ಮಾಣ ಕಾಮಗಾರಿ | 1910.00 |
| 5. | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ಹಾಸ್ಟೆಲ್ ಕಟ್ಟಡ ನಿರ್ಮಾಣ ಕಾಮಗಾರಿ | 2014.00 |
| 6. | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ಹಾಸ್ಟೆಲ್ ಕಟ್ಟಡ ನಿರ್ಮಾಣ ಕಾಮಗಾರಿ | 2014.00 |
| | Total | 35938.00 |

ಸದರಿ ಕಾಮಗಾರಿಗಳನ್ನು ಕೈಗೊಳ್ಳಲು ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಸದರಿ ಕಾಮಗಾರಿಗಳಿಗೆ ಮೊಬಲೈಷೇಸ್ ಮೊತ್ತವನ್ನು ಬಿಡುಗಡೆಗೊಳಿಸುವುದು ಅವಶ್ಯವಿರುವ ಹಿನ್ನೆಲೆಯಲ್ಲಿ, ಈ ಕಾಮಗಾರಿಗಳಿಗೆ ಪ್ರಸಕ್ತ ಸಾಲಿನ ಲೆಕ್ಕಶೀರ್ಷಿಕೆ 4210-03-105-1-20-386 ರ ಅಡಿಯಲ್ಲಿ ಲಭ್ಯವಿರುವ ರೂ.9509.00 ಲಕ್ಷಗಳನ್ನು ಮರುಹೊಂದಾಣಿಕೆ ಮೂಲಕ ಲೆಕ್ಕಶೀರ್ಷಿಕೆ 4210-03-105-1-10-386 ರ ಅಡಿಯಲ್ಲಿ ಬಿಡುಗಡೆಗೊಳಿಸಲು ಹಾಗೂ ಉಳಿದ ಮೊತ್ತ ರೂ.2491.00 ಲಕ್ಷಗಳನ್ನು ಪ್ರಸಕ್ತ ಸಾಲಿನ ಲೆಕ್ಕಶೀರ್ಷಿಕೆ 4210-03-105-1-10-422/423 ರ ಅಡಿಯಲ್ಲಿ ಪೂರಕ ಅಂದಾಜು-3 ರಲ್ಲಿ ಹೆಚ್ಚುವರಿಯಾಗಿ ಬಿಡುಗಡೆಗೊಳಿಸಲು ಇಲಾಖೆಯು ನಿರ್ಣಯಿಸಿರುತ್ತದೆ.

ಓದಲಾದ (2) ರ ಸರ್ಕಾರದ ಆದೇಶದಲ್ಲಿ ಆರ್ಥಿಕ ಇಲಾಖೆಯು ಗದಗ, ಕೊಪ್ಪಳ, ಚಾಮರಾಜನಗರ ಮತ್ತು ಕೊಡಗು ವೈದ್ಯಕೀಯ ಕಾಲೇಜುಗಳಲ್ಲಿ ಆಸ್ಪತ್ರೆಗಳು ಹಾಗೂ ಹಾಸ್ಟೆಲ್ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಪ್ರಸಕ್ತ ಸಾಲಿನ ಲೆಕ್ಕಶೀರ್ಷಿಕೆ 4210-03-105-1-20-386 ರ ಅಡಿಯಲ್ಲಿ ಲಭ್ಯವಿರುವ ರೂ.9509.00 ಲಕ್ಷಗಳನ್ನು ಲೆಕ್ಕಶೀರ್ಷಿಕೆ 4210-03-105-1-10-386 ರ ಅಡಿಯಲ್ಲಿ ಮರುಹೊಂದಾಣಿಕೆ ಮೂಲಕ ಒದಗಿಸಲು ಮಂಜೂರಾತಿ ನೀಡಿರುತ್ತದೆ. ಅದೇ ರೀತಿ ರೂ.2491.00 ಲಕ್ಷಗಳನ್ನು ಲೆಕ್ಕಶೀರ್ಷಿಕೆ 4210-03-105-1-10 ರ ಉಪ ಲೆಕ್ಕಶೀರ್ಷಿಕೆ 422-ಎಸ್‌ಸಿಪಿ ಯೋಜನೆ ಅಡಿಯಲ್ಲಿ ರೂ.2250.00 ಲಕ್ಷಗಳನ್ನು ಹಾಗೂ ಸದರಿ ಲೆಕ್ಕಶೀರ್ಷಿಕೆಯ ಉಪ ಲೆಕ್ಕಶೀರ್ಷಿಕೆ 423-ಟಿಎಸ್‌ಪಿ ಯೋಜನೆ ಅಡಿ ರೂ.241.00 ಲಕ್ಷಗಳನ್ನು ಈ ರೀತಿಯಾಗಿ ರೂ.2491.00 ಲಕ್ಷಗಳನ್ನು ಪೂರಕ ಅಂದಾಜು -3 ರ ಅಡಿಯಲ್ಲಿ ಹೆಚ್ಚುವರಿಯಾಗಿ ಒದಗಿಸಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ, ಗದಗ, ಕೊಪ್ಪಳ ಮತ್ತು ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ಕಟ್ಟಡಗಳ ನಿರ್ಮಾಣಕ್ಕಾಗಿ ತಲಾ ರೂ.3000.00 ಲಕ್ಷಗಳಂತೆ ಒಟ್ಟು ರೂ.9000.00 ಲಕ್ಷಗಳನ್ನು ಹಾಗೂ ಕೊಪ್ಪಳ, ಕೊಡಗು ಮತ್ತು ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಆವರಣದಲ್ಲಿ ಹಾಸ್ಟೆಲ್ ಕಟ್ಟಡಗಳ ನಿರ್ಮಾಣಕ್ಕಾಗಿ ತಲಾ ರೂ.1000.00 ಲಕ್ಷಗಳಂತೆ ರೂ.3000.00 ಲಕ್ಷಗಳನ್ನು ಈ ರೀತಿಯಾಗಿ ಒಟ್ಟು ರೂ.12000.00 ಲಕ್ಷಗಳನ್ನು ಬಿಡುಗಡೆಗೊಳಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಆಕುಕ 581 ಎಂಪಿಎಸ್ 2017, ಬೆಂಗಳೂರು ದಿನಾಂಕ 09.03.2018</u>**

ಗದಗ, ಕೊಪ್ಪಳ ಮತ್ತು ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ಕಟ್ಟಡಗಳ ನಿರ್ಮಾಣ ಕಾಮಗಾರಿಗೆ ತಲಾ ರೂ.3000.00 ಲಕ್ಷಗಳಂತೆ (ಮೂರು ಸಾವಿರ ಲಕ್ಷ ರೂಪಾಯಿಗಳು ಮಾತ್ರ) ಒಟ್ಟು ರೂ.9000.00 ಲಕ್ಷಗಳನ್ನು (ಒಂಬತ್ತು ಸಾವಿರ ಲಕ್ಷ ರೂಪಾಯಿಗಳು ಮಾತ್ರ) ಹಾಗೂ ಕೊಪ್ಪಳ, ಕೊಡಗು ಮತ್ತು ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಆವರಣದಲ್ಲಿ ಹಾಸ್ಟೆಲ್ ಕಟ್ಟಡಗಳ ನಿರ್ಮಾಣ ಕಾಮಗಾರಿಗೆ ತಲಾ ರೂ.1000.00 ಲಕ್ಷಗಳಂತೆ (ಒಂದು ಸಾವಿರ ಲಕ್ಷ ರೂಪಾಯಿಗಳು ಮಾತ್ರ) ತಲಾ ರೂ.3000.00 ಲಕ್ಷಗಳನ್ನು (ಮೂರು ಸಾವಿರ ಲಕ್ಷ ರೂಪಾಯಿಗಳು ಮಾತ್ರ) ಈ ರೀತಿಯಾಗಿ ಕೆಳಕಂಡಂತೆ ಒಟ್ಟು ರೂ.12000.00 ಲಕ್ಷಗಳ (ಹನ್ನೆರಡು ಸಾವಿರ ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಿದೆ.

**(Rs. in lakhs)**

| ಕ್ರ ಸಂ. | ಕಾಮಗಾರಿಯ ವಿವರಗಳು | ಅಂದಾಜು ಮೊತ್ತ | ಲೆಕ್ಕಶೀರ್ಷಿಕೆ | ಬಿಡುಗಡೆಗೊಳಿಸಲಾದ ಮೊತ್ತ | |
|---|---|---|---|---|---|
| | | | | ಅಂಕಿಗಳಲ್ಲಿ | ಅಕ್ಷರಗಳಲ್ಲಿ |
| 1. | ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿ | 10000.00 | 4210-03-105-1-10-386 | 3000.00 | (ಮೂರು ಸಾವಿರ ಲಕ್ಷ ರೂಪಾಯಿಗಳು ಮಾತ್ರ) |
| 2. | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿ | 10000.00 | 4210-03-105-1-10-386 | 3000.00 | (ಮೂರು ಸಾವಿರ ಲಕ್ಷ ರೂಪಾಯಿಗಳು ಮಾತ್ರ) |

| | | | | | |
|---|---|---|---|---|---|
| 3. | ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿ | 10000.00 | 4210–03–105–1–10–386 | 3000.00 | (ಮೂರು ಸಾವಿರ ಲಕ್ಷ ರೂಪಾಯಿಗಳು ಮಾತ್ರ) |
| 4. | ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ಹಾಸ್ಟೆಲ್ ಕಟ್ಟಡ ನಿರ್ಮಾಣ ಕಾಮಗಾರಿ | 1910.00 | 4210–03–105–1–10–386 | 509.00 | (ಐದು ನೂರ ಒಂಬತ್ತು ಲಕ್ಷ ರೂಪಾಯಿಗಳು ಮಾತ್ರ) |
| | | | 4210–03–105–1–10–422 | 450.00 | (ನಾಲ್ಕು ನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ) |
| | | | 4210–03–105–1–10–423 | 41.00 | ನಲವತ್ತೊಂದು ಲಕ್ಷ ರೂಪಾಯಿಗಳು ಮಾತ್ರ) |
| 5. | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ಹಾಸ್ಟೆಲ್ ಕಟ್ಟಡ ನಿರ್ಮಾಣ ಕಾಮಗಾರಿ | 2014.00 | 4210–03–105–1–10–422 | 900.00 | (ಒಂಬೈನೂರು ಲಕ್ಷ ರೂಪಾಯಿಗಳು |
| | | | 4210–03–105–1–10–423 | 100.00 | ಒಂದು ನೂರು ಲಕ್ಷ ರೂಪಾಯಿಗಳು ಮಾತ್ರ) |
| 6. | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ಹಾಸ್ಟೆಲ್ ಕಟ್ಟಡ ನಿರ್ಮಾಣ ಕಾಮಗಾರಿ | 2014.00 | 4210–03–105–1–10–422 | 900.00 | (ಒಂಬೈನೂರು ಲಕ್ಷ ರೂಪಾಯಿಗಳು ಮಾತ್ರ) |
| | | | 4210–03–105–1–10–423 | 100.00 | ಒಂದು ನೂರು ಲಕ್ಷ ರೂಪಾಯಿಗಳು ಮಾತ್ರ) |
| | Total | 35938.00 | | 12000.00 | (ಹನ್ನೆರಡು ಸಾವಿರ ಲಕ್ಷ ರೂಪಾಯಿಗಳು ಮಾತ್ರ) |

<u>ಷರತ್ತುಗಳು:</u>

(1) ಸದರಿ ಕಾಮಗಾರಿಗಳಿಗೆ ಸವಿವರ ಅಂದಾಜು ಪಟ್ಟಿಗಳನ್ನು ತಯಾರಿಸಿ, ಟೆಂಡರ್ ಕರೆಯುವ ಮುನ್ನ ಸದರಿ ಅಂದಾಜು ಪಟ್ಟಿಗಳಿಗೆ ತಾಂತ್ರಿಕ ಅನುಮೋದನೆ ಪಡೆಯತಕ್ಕದ್ದು.

(2) ಈ ಕಾಮಗಾರಿಗಳ ವೆಚ್ಚವನ್ನು ಲೆಕ್ಕಶೀರ್ಷಿಕೆ 4210–03–105–1–10–386 ರ ಅಡಿ ಮರು ಹೊಂದಾಣಿಕೆ ಮೂಲಕ ಒದಗಿಸಲಾಗಿರುವ ಅನುದಾನದಲ್ಲಿ ಮತ್ತು ಲೆಕ್ಕಶೀರ್ಷಿಕೆ 4210–03–105–1–10–422/423 ರ ಅಡಿಯಲ್ಲಿ ಪೂರಕ ಅಂದಾಜು–3 ರಲ್ಲಿ ಹೆಚ್ಚುವರಿಯಾಗಿ ಒದಗಿಸಲಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.

(3) ಸದರಿ ಕಾಮಗಾರಿಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ಅದರ ಅಡಿಯಲ್ಲಿ ರಚಿತವಾಗಿರುವ ನಿಯಮಗಳ ಅಡಿಯಲ್ಲಿ ನಿರ್ಮಾಣ ಮಾಡತಕ್ಕದ್ದು ಹಾಗೂ ಈ ಸಂಬಂಧಿತವಾಗಿ ಆರ್ಥಿಕ ಇಲಾಖೆಯು ಕಾಲಕಾಲಕ್ಕೆ ಹೊರಡಿಸಲಾಗುವ ಸುತ್ತೋಲೆ / ಆದೇಶ / ಮಾರ್ಗಸೂಚಿಗಳನ್ವಯ ಕ್ರಮವಹಿಸತಕ್ಕದ್ದು.

(4) 1958 ಕರ್ನಾಟಕ ಆರ್ಥಿಕ ಸಂಹಿತೆಯ 161ನೇ ಅನುಚ್ಛೇದದಡಿ ಯಾವ ಉದ್ದೇಶಕ್ಕಾಗಿ ಮೇಲ್ಕಂಡ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದು. ನಿಗದಿತ ನಮೂನೆಯಲ್ಲಿ ಅನುದಾನದ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ, ಮಹಾಲೇಖಪಾಲರಿಗೆ ಮತ್ತು ವೈದ್ಯಕೀಯ ಶಿಕ್ಷಣ ನಿರ್ದೇಶಕರಿಗೆ ಸಲ್ಲಿಸತಕ್ಕದ್ದು. ಇದುವರೆವಿಗೆ ಬಿಡುಗಡೆ ಮಾಡಲಾದ ಅನುದಾನದ ಬಳಕೆ ಪ್ರಮಾಣ ಪತ್ರ ಮತ್ತು ಕಾಮಗಾರಿಯ ಪ್ರಗತಿಯ ವರದಿಯನ್ನು ಸಲ್ಲಿಸದೇ ಇದ್ದ ಪಕ್ಷದಲ್ಲಿ ಅನುದಾನದ ಭವಿಷ್ಯ ಬೇಡಿಕೆಯನ್ನು ಪರಿಗಣಿಸಲಾಗುವುದಿಲ್ಲ. ಸದರಿ ಸಂಹಿತೆಯ 342 (ii) (x) ನೇ ಅನುಚ್ಛೇದದಡಿ ಹೊಂದಾಣಿಕೆ (ರೀಕನ್ಸಿಲಿಯೇಷನ್) ಪ್ರಮಾಣ ಪತ್ರವನ್ನು ಮಹಾಲೇಖಪಾಲಕರ ಕಛೇರಿಯಿಂದ ಪಡೆದು ಮೂರು ತಿಂಗಳ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

(5) ತತ್ಸಂಬಂಧಿತ ಅನುದಾನದ ಬಿಲ್ಲುಗಳಿಗೆ ಸರ್ಕಾರದ ಉಪ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ಇವರು ಮೇಲು ರುಜು ಮಾಡಲು ಅಧಿಕೃತಗೊಳಿಸಲಾಗಿದೆ.

(6) ಸಂಬಂಧಿಸಿದ ಸಂಸ್ಥೆಯ ನಿರ್ದೇಶಕರು ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಡ್ರಾ ಮಾಡುವ ಬಿಲ್ಲುಗಳಿಗೆ ಸಕ್ಷಮ ಪ್ರಾಧಿಕಾರದ ಮೇಲು ರುಜು ಪಡೆದು ರಾಜ್ಯ ಹುಜೂರ್ ಖಜಾನೆ, ಬೆಂಗಳೂರು ಇಲ್ಲಿ ಸಲ್ಲಿಸತಕ್ಕದ್ದು.

(7) ಸದರಿ ಆದೇಶದಲ್ಲಿ ಬಿಡುಗಡೆ ಮಾಡಿರುವ ಮೊತ್ತವನ್ನು ಖಜಾನೆ ಇಲಾಖೆಯು ಸಂಬಂಧಿತ ಸಂಸ್ಥೆಗಳ ನಿರ್ದೇಶಕರಿಗೆ ಚೆಕ್ / ಡಿ.ಡಿ. ಮೂಲಕ ನೀಡತಕ್ಕದ್ದು.

(8) ಈ ಕಾಮಗಾರಿಯ ಬಿಲ್ಲುಗಳ ಮೊತ್ತವನ್ನು ಸಂಸ್ಥೆಯ ನಿರ್ದೇಶಕರು ಸಂಬಂಧಿತ ಗುತ್ತಿಗೆದಾರರಿಗೆ ಕ್ರಾಸ್ಡ್ ಚೆಕ್ ಮುಖಾಂತರ ಪಾವತಿಸತಕ್ಕದ್ದು. ಶಾಸನಬದ್ಧ ಕಳಕೆಗಳಾದ ಕೆ.ಎಸ್.ಟಿ., ಸಿ.ಎಸ್.ಟಿ., ಹಾಗೂ ಇತ್ಯಾದಿ ಕಳಕೆಗಳನ್ನು ಸಂಬಂಧಿತ ನಿರ್ದೇಶಕರು ಪಾವತಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 80 ವೆಚ್ಚ-5/2018, ದಿನಾಂಕ 19.02.2018 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಚಂದ್ರಶೇಖರ)
ಸರ್ಕಾರದ ಉಪ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಜಿ & ಇ & ಆರ್‌ಎಸ್‌ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.

3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಮುಖ್ಯ ಅಭಿಯಂತರರು, ಕೆ.ಹೆಚ್.ಎಸ್.ಡಿ.ಆರ್.ಪಿ., ಶೇಷಾದ್ರಿ ರಸ್ತೆ, ಬೆಂಗಳೂರು-5600001.
6. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560009.
7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು-560001.
8. ನಿರ್ದೇಶಕರು, ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ.
9. ನಿರ್ದೇಶಕರು, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ.
10. ನಿರ್ದೇಶಕರು, ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ.
11. ನಿರ್ದೇಶಕರು, ಕೊಡಗು, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಡಗು.
12. ಕಾರ್ಯನಿರ್ವಾಹಕ ಅಭಿಯಂತರರು, ಕೆ.ಹೆಚ್.ಎಸ್.ಡಿ.ಆರ್.ಪಿ, ಮೈಸೂರು ವಿಭಾಗ, ಮೈಸೂರು.
13. ಕಾರ್ಯನಿರ್ವಾಹಕ ಅಭಿಯಂತರರು, ಕೆ.ಹೆಚ್.ಎಸ್.ಡಿ.ಆರ್.ಪಿ, ಬೆಳಗಾವಿ ವಿಭಾಗ, ಬೆಳಗಾವಿ.
14. ಕಾರ್ಯನಿರ್ವಾಹಕ ಅಭಿಯಂತರರು, ಕೆ.ಹೆಚ್.ಎಸ್.ಡಿ.ಆರ್.ಪಿ, ಕಲಬುರಗಿ ವಿಭಾಗ, ಕಲಬುರಗಿ.
15. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.
16. ಯೋಜನಾಧಿಕಾರಿಗಳು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
17. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.